ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು

ಸ್ಪೆಷಲ್ ಕೇಸ್ ನಂಃ 105/2015

(ಫ್ರಾಸಾ-9 ಚಾಸಾ-11 )
ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು
ದಿಃ 04.01.2023.

| | | |
|---|---|---|
| ಸಾಕ್ಷಿದಾರರ ಹೆಸರು | - | ಉಮೇಶ್ |
| ತಂದೆಯ ಹೆಸರು | - | ಮುನಿಶಾಮಪ್ಪ |
| ವಯಸ್ಸು | - | 38 ವರ್ಷ, |
| ಉದ್ಯೋಗ | - | ಚಾಲಕ |
| ವಾಸ | - | ಗೋಪಸಂದ್ರ |

ಮುಖ್ಯ ವಿಚಾರಣೆಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ

ಈಗ ತೋರಿಸಿದ ದಾಖಲೆ ಮೇಲೆ ನನ್ನ ಸಹಿ ಇದೆ. ಸಾಕ್ಷಿಗೆ ತೋರಿಸಿದ ದಾಖಲೆ ಸ್ಥಳ ಮಹಜರ್ ಇದ್ದು ಅದನ್ನು ನಿಪಿ-7 ಎಂದು ಗುರ್ತಿಸಲಾಯಿತು. ಸಾಕ್ಷಿದಾರರ ಸಹಿಯನ್ನು ನಿಪಿ-7(ಎ) ಎಂದು ಗುರ್ತಿಸಲಾಯಿತು. ಸದರಿ ದಾಖಲೆಗೆ ಅತ್ತಿಬೆಲೆ ಪೋಲಿಸ್ ಠಾಣೆಯಲ್ಲಿ 7-8 ವರ್ಷಗಳ ಹಿಂದೆ ಸಹಿ ಮಾಡಿದ್ದೇನೆ. ಅದಕ್ಕೆ ಮತ್ಯಾರು ಸಹಿ ಮಾಡಿದ್ದಾರೆ ಗೊತ್ತಿಲ್ಲ. ಚಾಸಾ-1 ಶರತ್ ಈತನ ಪರಿಚಯ ಇದೆ. ನಿಪಿ-7 ಕ್ಕೆ ಸಹಿ ಮಾಡುವಾಗ ಆತ ಇರಲಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಎಸ್‌ಪಿಪಿ ರವರು ವಿನಂತಿಸಿದ್ದರಿಂದ ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಕರವರಿಂದಃ

2. ದಿಃ30.01.2015 ರಂದು ಪೋಲಿಸರು ನನ್ನನ್ನು ಮತ್ತು ಚಾಸಾ-12 ಈತನನ್ನು ರಾಮಸಾಗರ ಗ್ರಾಮದ ಬಸ್ ನಿಲ್ದಾಣ ಹತ್ತಿರ ಪಂಚಸಾಕ್ಷಿದಾರರಾಗಿ ಬೆಳಗ್ಗೆ ಕರೆಸಿದ್ದರು ಎಂದರೆ ಸರಿಯಲ್ಲ. ಅಲ್ಲಿ ಚಾಸಾ-1 ಶರತ್ ಸಹ ಇದ್ದರು ಎಂದರೆ ಸರಿಯಲ್ಲ. ಅವರು ಘಟನಾ ಸ್ಥಳವನ್ನು ತೋರಿಸಿದರು ಮತ್ತು ಪೋಲಿಸರು ಆ ಸ್ಥಳ ಮಹಜರ್ ಅನ್ನು ನಮ್ಮ ಸಮಕ್ಷಮ ನಿಪಿ-7 ರಂತೆ ಬಳಗ್ಗೆ 8 ರಿಂದ 9 ಘಂಟೆ ಸಮಯದಲ್ಲಿ ಮಾಡಿದರು ಎಂದರೆ ಸರಿಯಲ್ಲ. ನಿಪಿ-7 ನ್ನು ತಿಳಿದುಕೊಂಡು ಅದಕ್ಕೆ ಅಲ್ಲೇ ಸಹಿ ಮಾಡಿದ್ದೇನೆ ಎಂದರೆ

ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸುತ್ತಾರೆ.

(ಸಾಕ್ಷಿ ಹೇಳಿದಂತೆ ಹೇಳಿಕೆಯನ್ನು ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಿ ಓದಿ ಹೇಳಿದ್ದು ಸಾಕ್ಷಿ ಸರಿ ಇರುವುದಾಗಿ ಒಪ್ಪಿರುತ್ತಾರೆ ಎಂದು ದೃಢೀಕರಿಸುತ್ತೇನೆ)

ಓ ಹೇ ಸಾ ಸ ಸಹಿ ಮಾಡಿದ್ದಾರೆ,

(ವಿ. ಎಂ. ಆನಂದಶೆಟ್ಟಿ)
ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು